# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಡಾ|| ಎಂ.ಜಿ. ಮುಳೆ (ವಿಧಾನಸಭಾ ಕ್ಷೇತ್ರ)**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1401**

**ಉತ್ತರಿಸಬೇಕಾದ ದಿನಾಂಕ : 18-12-2025**

**ಉತ್ತರಿಸಬೇಕಾದ ಸಚಿವರು : ಸನ್ಮಾನ್ಯ ಮುಖ್ಯಮಂತ್ರಿಗಳು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿಗೆ ಮಂಜೂರಾಗಿರುವ ವಿವಿಧ ದರ್ಜೆಯ ಹುದ್ದೆಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ; ಎಷ್ಟು ಹುದ್ದೆಗಳು ಯಾವ ಅವಧಿಯಿಂದ ಖಾಲಿ ಇವೆ; (ಖಾಲಿ ಇರುವ ಹುದ್ದೆಗಳ ಸಂಖ್ಯೆಯನ್ನು ವರ್ಗವಾರು ಅಂಕಿ ಅಂಶಗಳನ್ನು ಒದಗಿಸುವುದು) | ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನಲ್ಲಿ ವಿವಿಧ ವೃಂದದಲ್ಲಿ 606 ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 426 ಹುದ್ದೆಗಳು ಭರ್ತಿಯಾಗಿರುತ್ತವೆ ಹಾಗೂ ವಿವಿಧ ವೃಂದದಲ್ಲಿ 180 ಹುದ್ದೆಗಳು ಖಾಲಿ ಇರುತ್ತದೆ (ವರ್ಗವಾರು ಅಂಕಿ ಅಂಶಗಳನ್ನು **ಅನುಬಂಧದಲ್ಲಿ** ನೀಡಲಾಗಿದೆ). |
| ಆ) | ಬ್ಯಾಂಕಿನಲ್ಲಿ ಕ್ಲರ್ಕ್ ಕಮ್ ಕ್ಯಾಶಿಯರ್ ಎಷ್ಟು ಹುದ್ದೆಗಳಿಗೆ ಯಾವಾಗ ಜಾಹೀರಾತು ನೀಡಲಾಯಿತು ಮತ್ತು ಇದಕ್ಕೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಹಾಗೂ ಶುಲ್ಕದ ರೂಪದಲ್ಲಿ ಬಂದ ಹಣದ ಮೊತ್ತ ಎಷ್ಟು; ಈ ನೇಮಕಾತಿ ಪ್ರಕ್ರಿಯೆ ಈಗ ಯಾವ ಹಂತದಲ್ಲಿದೆ; ಇಲ್ಲಿಯವರೆಗೆ ಲಿಖಿತ ಪರೀಕ್ಷೆ ಮತ್ತು ಮೌಖಿಕ ಸಂದರ್ಶನ ನಡೆಸಲಾಗಿದೆಯೇ; ಒಂದು ವೇಳೆ ಸಂದರ್ಶನ ನಡೆಸದೇ ಇದ್ದರೆ ಇದಕ್ಕೆ ಕಾರಣವೇನು; | ಬ್ಯಾಂಕಿನಲ್ಲಿ **'ಬ್ಯಾಂಕ್ ಸಹಾಯಕರ'** ವೃಂದದಲ್ಲಿ ಖಾಲಿ ಇದ್ದ ಒಟ್ಟು 93 ಹುದ್ದೆಗಳಿಗೆ ದಿನಾಂಕ:05.03.2024 ರಂದು ಜಾಹೀರಾತು ನೀಡಲಾಗಿದ್ದು, 8079 ಅರ್ಜಿಗಳು ಸ್ವೀಕೃತವಾಗಿರುತ್ತವೆ ಹಾಗೂ ಅರ್ಜಿಯೊಂದಿಗೆ ರೂ.**74,35,110/-** ಶುಲ್ಕದ ರೂಪದಲ್ಲಿ ಸಂಗ್ರಹವಾಗಿರುತ್ತದೆ.<br><br>ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ದಿನಾಂಕ:01.09.2024 ರಂದು ಲಿಖಿತ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ಲಿಖಿತ ಪರೀಕ್ಷೆಯ ಫಲಿತಾಂಶವನ್ನು ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ದಿನಾಂಕ:20.12.2024 ರಂದು ಪ್ರಕಟಿಸಲಾಗಿರುತ್ತದೆ. ಆದರೆ, ಬ್ಯಾಂಕಿನ ಆಡಳಿತ ಮಂಡಳಿ ಪದಾವಧಿಯು ದಿನಾಂಕ: 21.12.2025 ರಂದು ಮುಕ್ತಾಯವಾಗುತ್ತಿರುವುದರಿಂದ ಹೊಸ ಆಡಳಿತ ಮಂಡಳಿ ರಚನೆಯಾದ ನಂತರ ಅರ್ಹ ಅಭ್ಯರ್ಥಿಗಳಿಗೆ ಮೌಖಿಕ ಸಂದರ್ಶನ ನಡೆಸಲು ಕ್ರಮವಹಿಸಲಾಗುವುದು. |

| | | |
|---|---|---|
| ಇ) | ಈ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಆದಷ್ಟು ಶೀಘ್ರವಾಗಿ ಪೂರ್ಣಗೊಳಿಸುವುದಾಗಿ ಮಾನ್ಯ ಮುಖ್ಯಮಂತಿಗಳು ಈ ಹಿಂದೆ ಭರವಸೆ ನೀಡಿ ಹಲವಾರು ತಿಂಗಳಾದರೂ ಈ ಪ್ರಕ್ರಿಯೆಯಲ್ಲಿ ಯಾವುದೇ ಪ್ರಗತಿ ಕಾಣದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆಗಿದ್ದಲ್ಲಿ, ಇದಕ್ಕೆ ಕಾರಣಗಳೇನು; ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಆದಷ್ಟು ಶೀಘ್ರವಾಗಿ ಈ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸರ್ಕಾರದ ಮುಂದಿನ ಕ್ರಮಗಳೇನು? | ಈಗಾಗಲೇ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ದಿನಾಂಕ:01.09.2024 ರಂದು ಲಿಖಿತ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ಲಿಖಿತ ಪರೀಕ್ಷೆಯ ಫಲಿತಾಂಶವನ್ನು ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ದಿನಾಂಕ:20.12.2024 ರಂದು ಪ್ರಕಟಿಸಲಾಗಿರುತ್ತದೆ. ಆದರೆ, ಬ್ಯಾಂಕಿನ ಆಡಳಿತ ಮಂಡಳಿ ಪದಾವಧಿಯು ದಿನಾಂಕ: 21.12.2025 ರಂದು ಮುಕ್ತಾಯವಾಗುತ್ತಿರುವುದರಿಂದ ಹೊಸ ಆಡಳಿತ ಮಂಡಳಿ ರಚನೆಯಾದ ನಂತರ ಅರ್ಹ ಅಭ್ಯರ್ಥಿಗಳಿಗೆ ಮೌಖಿಕ ಸಂದರ್ಶನ ನಡೆಸಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಸಿಒ 337 ಸಿಎಲ್‌ಎಸ್ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ

ಅನುಬಂಧ-1

## ಬ್ಯಾಂಕಿನಲ್ಲಿ ವಿವಿಧ ವೃಂದದಲ್ಲಿ ಮಂಜೂರಾದ/ಖಾಲಿ ಇರುವ ಹುದ್ದೆಗಳ ವಿವರ

| ಕ್ರಮ ಸಂಖ್ಯೆ | ಹುದ್ದೆಗಳ ವಿವರ | ಮಂಜೂರಾದ ಹುದ್ದೆಗಳು | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಮುಖ್ಯ ಪ್ರಧಾನ ವ್ಯವಸ್ಥಾಪಕರು | 03 | 03 | 00 |
| 2 | ಪ್ರಧಾನ ವ್ಯವಸ್ಥಾಪಕರು | 06 | 05 | 01 |
| 3 | ಉಪ ಪ್ರಧಾನ ವ್ಯವಸ್ಥಾಪಕರು | 12 | 12 | 00 |
| 4 | ಹಿರಿಯ ಸಂಖ್ಯಾಶಾಸ್ತ್ರಜ್ಞರು | 01 | 00 | 01 |
| 5 | ಸಹಾಯಕ ಪ್ರಧಾನ ವ್ಯವಸ್ಥಾಪಕರು | 28 | 28 | 00 |
| 6 | ವ್ಯವಸ್ಥಾಪಕರು | 86 | 86 | 00 |
| 7 | ಸಹಾಯಕ ವ್ಯವಸ್ಥಾಪಕರು | 127 | 126 | 01 |
| 8 | ಕಿರಿಯಕನ್ನಡ ಭಾಷಾಂತರಕಾರರು | 01 | 00 | 01 |
| 9 | ಬ್ಯಾಂಕ್ ಸಹಾಯಕರು/ ಶೀಘ್ರಲಿಪಿಗಾರರು | 215 | 112 | 103 |
| 10 | ಕಛೇರಿ ಸಹಾಯಕರು/ ವಾಹನ ಚಾಲಕರು | 127 | 54 | 73 |
| | **ಒಟ್ಟು** | **606** | **426** | **180** |

**ಸಹಕಾರ ಸಂಘಗಳ ಅಪರ ನಿಬಂಧಕರು**
**(ಪತ್ತು)**